# Akashvani : Bangalore
# Regional Bulletin In Kannada
# 01.06.2024 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಕರ್ನಾಟಕ ವಿಧಾನ ಪರಿಷತ್ ದ್ವೈವಾರ್ಷಿಕ ಚುನಾವಣೆ ; ಆಯೋಗದಿಂದ ಸಕಲ ಸಿದ್ಧತೆ

೨. ಪ್ರಜ್ವಲ್ ರೇವಣ್ಣ ಕ್ಷಮಿಸುವ ಪ್ರಶ್ನೆಯೇ ಇಲ್ಲ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೩. ಏಳನೇ ಮತ್ತು ಅಂತಿಮ ಹಂತದ ಲೋಕಸಭೆ ಚುನಾವಣೆ ಮತದಾನ ಪೂರ್ಣ

೪. ಮುಂದಿನ ಎರಡು-ಮೂರು ದಿನಗಳಲ್ಲಿ ರಾಜ್ಯದ ಕೆಲವು ಭಾಗಗಳಲ್ಲಿ ನೈಋತ್ಯ ಮುಂಗಾರು ತೀವ್ರ ; ಹವಾಮಾನ ಇಲಾಖೆ ಮುನ್ಸೂಚನೆ

<><*<><>*><>

ಕರ್ನಾಟಕ ವಿಧಾನ ಪರಿಷತ್ತಿನ ಶಿಕ್ಷಕರ ಹಾಗೂ ಪದವೀಧರ ಕ್ಷೇತ್ರಗಳಿಗೆ ಜೂನ್ ೩ರಂದು ಮತದಾನ ನಡೆಯಲಿದೆ. ಒಟ್ಟು ೭೮ ಅಭ್ಯರ್ಥಿಗಳು ಕಣದಲ್ಲಿದ್ದು ಒಟ್ಟು ಮೂರು ಲಕ್ಷದ ೬೩ ಸಾವಿರದ ೫೭೩ ಮಂದಿ ಮತದಾರರಿದ್ದಾರೆ. ಆರು ಕ್ಷೇತ್ರಗಳಲ್ಲಿ ಒಟ್ಟು ೭೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ನೊಂದಾಯಿತ ಮತದಾರರು ಆಧಾರ್ ಕಾರ್ಡ್, ಪಾನ್ ಕಾರ್ಡ್, ಡ್ರೈವಿಂಗ್ ಲೈಸೆನ್ಸ್ ಸೇರಿದಂತೆ ಇತರೇ ದಾಖಲೆಗಳ ಮೂಲಕ ಮತದಾನ ಮಾಡಬಹುದಾಗಿದೆ. ಮತದಾನಕ್ಕೆ ಚುನಾವಣಾ ಆಯೋಗ ಸಕಲ ಸಿದ್ಧತೆ ಕೈಗೊಂಡಿದೆ.

<><*<><>*><>

ಪ್ರಜ್ವಲ್ ರೇವಣ್ಣ ಕ್ಷಮಿಸಲಾರದಂತಹ ಅಪರಾಧ ಮಾಡಿದ್ದಾರೆ. ಹೀಗಾಗಿ ಅವರನ್ನು ಕ್ಷಮಿಸುವ ಪ್ರಶ್ನೆಯೇ ಇಲ್ಲ ಎಂದು ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಹೇಳಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಪ್ರಜ್ವಲ್ ರೇವಣ್ಣನನ್ನು ಎಸ್ಐಟಿ ವಶಕ್ಕೆ ಒಪ್ಪಿಸಿದ್ದಾರೆ. ಸರಿಯಾದ ರೀತಿಯಲ್ಲಿ ತನಿಖೆ ಆಗಬೇಕು. ಇದೊಂದು ಗಂಭೀರ ಪ್ರಕರಣ. ಭಾರತದಂತಹ ದೇಶದಲ್ಲಿ ಮಹಿಳೆಯರನ್ನು ನಾವು ಗೌರವದಿಂದ ಕಾಣುತ್ತೇವೆ. ಈ ರೀತಿಯ ಘಟನೆ ನಡೆದಿರುವುದು ಹೇಸಿಗೆ ಹುಟ್ಟಿಸುವಂತಾಗಿದೆ ಎಂದರು. ಈ ಪ್ರಕರಣದಲ್ಲಿ ನ್ಯಾಯಾಂಗ ವ್ಯವಸ್ಥೆ ಸೂಕ್ತ ಕ್ರಮ ಕೈಗೊಳ್ಳಲಿದೆ ಎನ್ನುವ ಭರವಸೆ ಇದೆ. ತ್ವರಿತ ಗತಿಯಲ್ಲಿ ತನಿಖೆ ಪೂರ್ಣಗೊಳಿಸಿ, ಗರಿಷ್ಠ ಶಿಕ್ಷೆ ನೀಡುವಂತಾಗಬೇಕು ಎಂದು ಪ್ರಹ್ಲಾದ್ ಜೋಶಿ ಹೇಳಿದ್ದಾರೆ.

<><*<><>*><>

ಕಳೆದ ಸಾರಿ ಬಜೆಟ್‌ನಲ್ಲಿ ದಲಿತರಿಗಾಗಿ ಮೀಸಲಾಗಿಟ್ಟಿದ್ದ ೧೧ ಸಾವಿರ ಕೋಟಿ ರೂಪಾಯಿಗಳನ್ನು ರಾಜ್ಯ ಸರ್ಕಾರ ಬೇರೆ ಉದ್ದೇಶಕ್ಕೆ ವರ್ಗಾವಣೆ ಮಾಡಿದೆ ಎಂದು ಮಾಜಿ ಸಚಿವ ಅರಗ ಜ್ಞಾನೇಂದ್ರ ಆರೋಪಿಸಿದ್ದಾರೆ. ಶಿವಮೊಗ್ಗದ ಕೊಪ್ಪ ಸರ್ಕಲ್‌ನಲ್ಲಿ ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ನಡೆದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ವಾಲ್ಮೀಕಿ ನಿಗಮಕ್ಕೆ ೧೮೭ ಕೋಟಿ ರೂಪಾಯಿ ನೀಡಲಾಗಿದೆ. ಈ ಹಣವನ್ನು ಹೈದರಾಬಾದ್‌ನ ರತ್ನಾಕರ  ಬ್ಯಾಂಕ್‌ಗೆ ವರ್ಗಾವಣೆ ಮಾಡಲಾಗಿದೆ. ಅಲ್ಲಿಂದ ಒಂಬತ್ತು ಐಟಿ, ಬಿಟಿ ಕಂಪನಿಗಳಿಗೆ ಹಣ ವರ್ಗಾವಣೆ ಆಗಿದೆ ಎಂದು ಆರೋಪಿಸಿದ್ದಾರೆ.

<><*<><>*><>

ಏಳನೇ ಹಾಗೂ ಅಂತಿಮ ಹಂತದ ಲೋಕಸಭಾ ಚುನಾವಣೆಯ ಮತದಾನ ಪೂರ್ಣಗೊಂಡಿದೆ. ಈ ಹಂತದಲ್ಲಿ ಏಳು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡಿಗಢ ಸೇರಿದಂತೆ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಿ ಮತದಾನ ನಡೆಯಿತು.  ೫ ಗಂಟೆಯ ವೇಳೆಗೆ ಬಂದ ಅಂಕಿ-ಅಂಶಗಳ ಪ್ರಕಾರ, ೫೭ ಕ್ಷೇತ್ರಗಳಲ್ಲಿ ಒಟ್ಟಾರೆ ಶೇಕಡ ೫೮.೩೪ ರಷ್ಟು ಮತದಾನವಾಗಿದೆ. ಬಿಹಾರದಲ್ಲಿ ಶೇಕಡ ೪೮.೮೬, ಚಂಡೀಗಢದಲ್ಲಿ ೬೨.೮೦ ಹಿಮಾಚಲಪ್ರದೇಶದಲ್ಲಿ ೬೬.೫೬, ಜಾರ್ಖಂಡ್‌ನಲ್ಲಿ ೬೭.೯೫, ಒಡಿಶಾದಲ್ಲಿ ೬೨.೪೬, ಪಂಜಾಬ್‌ನಲ್ಲಿ ೫೫.೨೦, ಉತ್ತರ ಪ್ರದೇಶದಲ್ಲಿ ೫೪, ಹಾಗೂ ಪಶ್ಚಿಮಬಂಗಾಳದಲ್ಲಿ ಶೇಕಡ ೬೯.೮೯ ರಷ್ಟು ಮತದಾನವಾಗಿರುವ ಕುರಿತು ವರದಿಯಾಗಿದೆ.  ಈ ಹಂತದಲ್ಲಿ ಉತ್ತರ ಪ್ರದೇಶ ಮತ್ತು ಪಂಜಾಬ್‌ನಲ್ಲಿ ತಲಾ ೧೩, ಪಶ್ಚಿಮ ಬಂಗಾಳದಲ್ಲಿ ೯, ಬಿಹಾರದಲ್ಲಿ ೮, ಒಡಿಶಾದಲ್ಲಿ ೬, ಹಿಮಾಚಲ ಪ್ರದೇಶದಲ್ಲಿ ೪, ಜಾರ್ಖಂಡ್‌ನಲ್ಲಿ ೩ ಮತ್ತು ಕೇಂದ್ರಾಡಳಿತ ಪ್ರದೇಶವಾದ ಚಂಡೀಗಢದ ೧ ಲೋಕಸಭಾ ಕ್ಷೇತ್ರಕ್ಕೆ ಚುನಾವಣೆ ನಡೆದಿದೆ. ಇದೇ ವೇಳೆ ಒಡಿಶಾದ ೪೨ ವಿಧಾನಸಭಾ ಕ್ಷೇತ್ರಗಳಿಗೂ ಮತದಾನ ನಡೆಯಿತು.

<><*<><>*><>

ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಮತ ಎಣಿಕೆ ಕುಮಟಾದ ಡಾ. ಎ.ವಿ.ಬಾಳಿಗಾ ಕಾಲೇಜಿನಲ್ಲಿ ಇದೇ ೪ರಂದು ನಡೆಯಲಿದ್ದು, ಚುನಾವಣಾ ಆಯೋಗದ ನಿಯಮಾನುಸಾರ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಹೇಳಿದರು.

ಧ್ವನಿ : ಗಂಗೂಬಾಯಿ ಮಾನಕರ

ಕೋಲಾರ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಲೋಕಸಭಾ ಸಾರ್ವತ್ರಿಕ ಚುಣಾವಣೆಯ ಮತ ಎಣಿಕೆ ಕಾರ್ಯವು ಜೂ.೪ರಂದು ಜರುಗುವ ಹಿನ್ನೆಲೆಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ೧೦೦ ಮೀಟರ್ ವ್ಯಾಪ್ತಿಯ ಸುತ್ತಮುತ್ತಲಿನ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ, ಜಿಲ್ಲಾ ದಂಡಾಧಿಕಾರಿ ಮತ್ತು ಜಿಲ್ಲಾಧಿಕಾರಿ ಅಕ್ರಂ ಪಾಷ ಆದೇಶಿಸಿದ್ದಾರೆ.

## ಧ್ವನಿ : ಅಕ್ರಂಪಾಷ

ದಕ್ಷಿಣ ಕನ್ನಡ ಜಿಲ್ಲೆಯ ಲೋಕಸಭಾ ಚುನಾವಣಾ ಫಲಿತಾಂಶ ಹಿನ್ನೆಲೆಯಲ್ಲಿ ಜೂನ್ ೪ ರಂದು ಸುರತ್ಕಲ್ ಎನ್‌ಐಟಿಕೆಯ ಮತ ಎಣಿಕೆ ಕೇಂದ್ರದ ಸುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕೈಗೊಳ್ಳಲಾಗಿದೆ ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್‌ವಾಲ್ ತಿಳಿಸಿದ್ದಾರೆ. ಮತ ಎಣಿಕೆ ಹಿನ್ನೆಲೆಯಲ್ಲಿ ಮೂರು ಹಂತಗಳಲ್ಲಿ ಭದ್ರತೆ ಒದಗಿಸಲಾಗುತ್ತದೆ. ಮೂರು ಮಂದಿ ಡಿಸಿಪಿ, ಆರು ಎಸಿಪಿ, ೨೬ ಇನ್ಸ್‌ಪೆಕ್ಟರ್, ೮೫೦ ಸಿಬ್ಬಂದಿ, ಕೆಎಸ್‌ಆರ್‌ಪಿ, ಪ್ಯಾರಾ ಮಿಲಿಟರಿ ತುಕಡಿ ಕಾರ್ಯನಿರ್ವಹಿಸಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><*<><>*><>

ಕರ್ನಾಟಕ ವಿಧಾನ ಪರಿ?ತ್ ಈಶಾನ್ಯ ಪದವೀಧರರ ಮತಕ್ಷೇತ್ರದ ಚುನಾವಣೆಯ ಮತದಾನ ಇದೇ ೩ರಂದು ನಡೆಯಲಿದ್ದು, ಯಾದಗಿರಿ ಜಿಲ್ಲೆಯಲ್ಲಿ ೧೬ ಮತದಾನ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ.ಬಿ.ಸುಶೀಲಾ ತಿಳಿಸಿದ್ದಾರೆ. ಯಾದಗಿರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೧೦,೯೨೨ ಪುರುಷ, ೪,೬೪೭ ಮಹಿಳಾ ಪದವೀಧರ ಮತದಾರರು ಸೇರಿದಂತೆ ಒಟ್ಟು ೧೪,೮೪೨ ಪದವೀಧರ ಮತದಾರರಿದ್ದಾರೆ. ಇದೇ ೩ರಂದು ಬೆಳಗ್ಗೆ ೮ ಗಂಟೆಯಿಂದ ಸಂಜೆ ೪ ಗಂಟೆ ವರೆಗೆ ಮತದಾನ ನಡೆಯಲಿದೆ ಎಂದು ತಿಳಿಸಿದರು.

<><*<><>*><>

ಕರ್ನಾಟಕದ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ನ್ಯಾಯಮೂರ್ತಿ ವಲ್ಲೂರಿ ಕಾಮೇಶ್ವರ ರಾವ್, ಇಂದು ಪ್ರಮಾಣವಚನ ಸ್ವೀಕರಿಸಿದರು. ರಾಜಭವನದ ಗಾಜಿನ ಮನೆಯಲ್ಲಿ ಹಮ್ಮಿಕೊಂಡಿದ್ದ ಸಮಾರಂಭದಲ್ಲಿಂದು ನ್ಯಾಯಮೂರ್ತಿಗಳಿಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಗೌಪ್ಯತಾ ಪ್ರಮಾಣ ವಚನ ಬೋಧಿಸಿದರು. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಕರ್ನಾಟಕದ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ನಿಲಯ್ ವಿಪಿನ್‌ಚಂದ್ರ ಅಂಜಾರಿಯಾ, ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ರಜನೀಶ್ ಗೋಯಲ್ ಉಪಸ್ಥಿತರಿದ್ದರು.

<><*<><>*><>

ವಾಯುಪಡೆ ಮತ್ತು ಸಶಸ್ತ್ರ ಪಡೆಗಳಿಗೆ ಯುವಜನರು ಸೇರುವ ನಿಟ್ಟಿನಲ್ಲಿ ಉತ್ತೇಜಿಸಲು ಬೆಂಗಳೂರಿನ ಜಾಲಹಳ್ಳಿಯಲ್ಲಿ ಪ್ರಶಿಕ್ಷಣಾರ್ಥಿಗಳಿಂದ ಪಥ ಸಂಚಲನ ನಡೆಯಿತು. ಏರೋನಾಟಿಕ್ಸ್ ಪದವಿ ಪ್ರಶಿಕ್ಷಣಾರ್ಥಿಗಳಿಂದ ವಿವಿಧ ಕೌಶಲ್ಯ ಪ್ರದರ್ಶನ ನಡೆಯಿತು. ಈ ಸಂದರ್ಭದಲ್ಲಿ ಏರ್ ಮಾರ್ಷಲ್ ಎಸ್.ಪಿ. ಧಾರ್ಕರ್ ಸೇರಿದಂತೆ ವಾಯುಪಡೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ವೇಳೆ ಮಾತನಾಡಿದ ಏರ್ ಮಾರ್ಷಲ್ ಧಾರ್ಕರ್, ತರಬೇತಿ ಪಡೆದ ಅಧಿಕಾರಿಗಳು ದೈಹಿಕವಾಗಿ ಮತ್ತು

ಮಾನಸಿಕವಾಗಿ ಸದೃಢರಾಗಿ ಎಲ್ಲಾ ನಿಯೋಜಿತ ಕಾರ್ಯಗಳನ್ನು ಸಾಧಿಸುವಲ್ಲಿ ಯಶಸ್ವಿಯಾಗಲು ಶ್ರಮಿಸಬೇಕು ಎಂದು ಹೇಳಿದರು.

**<><*<><>*><>**

ಬೆಳಗಾವಿ ಹೊರವಲಯದ ಸಾಂಬ್ರಾದಲ್ಲಿನ ಏರಮನ್ ತರಬೇತಿ ಶಾಲೆಯಲ್ಲಿ ತರಬೇತಿ ಪಡೆದ ಅಗ್ನಿವೀರ ಪ್ರಶಿಕ್ಷಣಾರ್ಥಿಗಳ ಮೂರನೇ ತರಬೇತಿ ತಂಡದ ನಿರ್ಗಮನ ಪಥಸಂಚಲನ ಇಂದು ಜರುಗಿತು. ಪುರುಷ ಮತ್ತು ಮಹಿಳೆಯರು ಸೇರಿ ಒಟ್ಟು ೨ ಸಾವಿರದ ೬೧೪ ಅಗ್ನಿವೀರರು ಸತತ ೨೨ ವಾರಗಳ ಕಾಲ ಸಾಂಬ್ರಾದ ತರಬೇತಿ ಶಾಲೆಯಲ್ಲಿ ತರಬೇತಿ ಪೂರ್ಣಗೊಳಿಸಿದರು. ಭಾರತೀಯ ವಾಯುಪಡೆಯ ಸೌತ ವೆಸ್ಟರ್ನ್ ಏರ್ ಕಮಾಂಡರ್, ಏರ್ ವೈಸ್ ಮಾರ್ಷಲ್ ಆರ್. ರವಿಶಂಕರ್, ತರಬೇತಿ ಸಂದರ್ಭದ ವಿವಿಧ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ತೋರಿದ ಪ್ರತಿಭಾವಂತ ಪ್ರಶಿಕ್ಷಣಾರ್ಥಿಗಳಿಗೆ ಪ್ರಶಸ್ತಿ ನೀಡಿ ಗೌರವಿಸಿದರು.

**<><*<><>*><>**

ವಿಜಯಪುರ ಜಿಲ್ಲೆಯಲ್ಲಿ ಇತ್ತೀಚೆಗೆ ಸುರಿದ ಗಾಳಿ ಮಳೆಯಿಂದ ರೈತರು ಬೆಳೆದ ದ್ರಾಕ್ಷಿ, ಮಾವು, ದಾಳಿಂಬೆ, ಲಿಂಬು ಬೆಳೆಗಳು ಹಾಳಾಗಿವೆ. ಎರಡ್ಮೂರು ದಿನಗಳ ಕಾಲ ಜಿಲ್ಲೆಯ ಹಲವೆಡೆ ಸುರಿದ ಮಳೆಗೆ ಮರದಲ್ಲಿನ ಕಾಯಿ ಮತ್ತು ಹಣ್ಣುಗಳು ನೆಲಕಚ್ಚಿವೆ. ಜಿಲ್ಲೆಯ ಫಲವತ್ತತೆಗೆ ಹೊಂದಿಕೊಳ್ಳುವ ಈ ಭಾಗದ ರೈತರು ಹೆಚ್ಚಾಗಿ ಕೇಸರ ತಳಿಯ ಮಾವುಗಳನ್ನು ಬೆಳೆಯುತ್ತಾರೆ. ಜಿಲ್ಲೆಯಲ್ಲಿ ೮೨ ಹೆಕ್ಟರ್ ಪ್ರದೇಶದಲ್ಲಿ ಬೆಳೆದಿರುವ ತೋಟಗಾರಿಕಾ ಬೆಳೆಗಳು ಹಾಳಾಗಿದ್ದು, ಇಲಾಖೆಯ ಅಧಿಕಾರಿಗಳು ಜಮೀನುಗಳಿಗೆ ಭೇಟಿ ನೀಡಿ ಪರಿಸೀಲಿಸಿ, ಬೆಳೆ ಹಾಳಾದ ಬಗ್ಗೆ ಈಗಾಗಲೇ ಸರ್ಕಾರಕ್ಕೆ ವರದಿ ಸಲ್ಲಿಸಿದ್ದಾರೆ.

**ಧ್ವನಿ : ಭಾವಿದೊಡ್ಡಿ ರಾಹುಲ್ ಕುಮಾರ್**

**<><*<><>*><>**

ದಡಾರ ಮತ್ತು ರುಬೆಲ್ಲಾ ಲಸಿಕಾ ಅಭಿಯಾನವು ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಯಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಬಿ. ಸದಾಶಿವ ಪ್ರಭು ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ವಿಜಯನಗರದಲ್ಲಿ ನಡೆದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಮಗುವಿಗೆ ೯ ತಿಂಗಳ ತುಂಬಿದ ನಂತರ ಮೊದಲನೇ ಡೋಸ್ ನೀಡಬೇಕು. ಒಂದೂವರೆ ವರ್ಷಕ್ಕೆ ಎರಡನೇ ಡೋಸ್ ನೀಡಬೇಕು ಎಂದರು.

<><*<><>*><>

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮುಂಗಾರು ಪೂರ್ವ ಪ್ರಾಕೃತಿಕ ವಿಕೋಪದಿಂದ ಒಟ್ಟು ೧೨೪ ಮನೆಗಳು ಹಾನಿಗೊಳಗಾಗಿವೆ ಎಂದು ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ. ಸುಳ್ಯ ತಾಲೂಕಿನಲ್ಲಿ ೩ ಮನೆಗಳು ಸಂಪೂರ್ಣವಾಗಿ ಹಾನಿಗೊಳಗಾಗಿದ್ದು, ಉಳಿದ ತಾಲೂಕುಗಳಲ್ಲಿ ಒಟ್ಟು ೧೬ ಮನೆಗಳು ತೀವ್ರವಾಗಿ ಹಾಗೂ ೧೦೫ ಮನೆಗಳು ಭಾಗಶಃ ಹಾನಿಗೊಳಗಾಗಿವೆ ಎಂದು ಅವರು ಮಾಹಿತಿ ನೀಡಿದ್ದಾರೆ. ಮುಂಗಾರು ಆರಂಭಗೊಳ್ಳುವ ಹಿನ್ನೆಲೆಯಲ್ಲಿ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಜಿಲ್ಲೆ ಮತ್ತು ತಾಲೂಕು ಮಟ್ಟದಲ್ಲಿ ತುರ್ತು ವಿಪತ್ತು ನಿರ್ವಹಣೆಗಾಗಿ ದಿನದ ೨೪ ಗಂಟೆ ನಿಯಂತ್ರಣ ಕೊಠಡಿ ತೆರೆಯಲಾಗಿದೆ. ಮಹಾನಗರ ಪಾಲಿಕೆ, ಪೊಲೀಸ್ ಇಲಾಖೆ, ಅಗ್ನಿಶಾಮಕ, ಮೆಸ್ಕಾಂ ಇಲಾಖೆಯಲ್ಲಿಯೂ ಕೂಡಾ ತುರ್ತು ನಿರ್ವಹಣೆಗಾಗಿ ನಿಯಂತ್ರಣ ಕೊಠಡಿ ತೆರೆಯಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ರೈತರಿಗೆ ಬಿತ್ತನೆ ಬೀಜ, ಗೊಬ್ಬರ ಸೇರಿದಂತೆ ಉತ್ತಮ ಗುಣಮಟ್ಟದ ಕೃಷಿ ಪರಿಕರಗಳನ್ನು ಒದಗಿಸಿ, ರೈತರಿಗೆ ಸಮಸ್ಯೆ ಆಗದಂತೆ ಕ್ರಮ ವಹಿಸುವಂತೆ ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಮಟ್ಟದ ಉಸ್ತುವಾರಿ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಿದೆ. ರೈತರು ಕೃಷಿ ಚಟುವಟಿಕೆಗಳನ್ನು ಆರಂಭಿಸಿದ್ದಾರೆ. ರೈತರಿಗೆ ಬಿತ್ತನೆ ಬೀಜ, ರಸಗೊಬ್ಬರಗಳು ಸಮರ್ಪಕವಾಗಿ ಲಭ್ಯವಾಗುವಂತೆ ರೈತ ಸಂಪರ್ಕ ಕೇಂದ್ರಗಳಲ್ಲಿ ಹಾಗೂ ಮಾರಾಟ ಮಳಿಗೆಗಳಲ್ಲಿ ಶೇಖರಿಸಿಡಬೇಕು. ಕೃಷಿ ಪರಿಕರಗಳನ್ನು ಮಾರಾಟ ಮಾಡುವ ಅಂಗಡಿಗಳು ಕಡ್ಡಾಯವಾಗಿ ಪರಿಕರಗಳ ಬೆಲೆ ವಿವರಗಳನ್ನು ಅಂಗಡಿ ಮುಂದೆ ಪ್ರದರ್ಶಿಸಿರಬೇಕು ಎಂದರು. ಕಳಪೆ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕಗಳನ್ನು ಮಾರಾಟ ಮಾಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚಿಸಿದರು.

<><*<><>*><>

ಪ್ರಸಕ್ತ ಮುಂಗಾರು ಹಂಗಾಮಿಗಾಗಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ವಿಮಾ ಯೋಜನೆಯಡಿ ರೈತರು ಅಧಿಸೂಚಿತ ಬೆಳೆಗಳ ನೋಂದಣಿಗೆ ಸರಕಾರ ಅಧಿಸೂಚನೆ ಹೊರಡಿಸಿದೆ ಎಂದು ಬಾಗಲಕೋಟೆ ಜಿಲ್ಲಾಧಿಕಾರಿ ಜಾನಕಿ ಕೆ.ಎಂ. ತಿಳಿಸಿದರು. ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಆಲಿಕಲ್ಲು ಮಳೆ, ಭೂ ಕುಸಿತ, ಮೇಘ ಸ್ಫೋಟ ಮತ್ತು ಗುಡುಗು ಮಿಂಚುಗಳಿಂದಾಗಿ ಆಗುವ ಬೆಂಕಿ ಅವಘಡ, ಬೆಳೆ ನಷ್ಟ ಸಂಭವಿಸಿದರೆ, ಬೆಳೆ ವಿಮೆ ಮಾಡಿಸಿರುವ ರೈತರು ಈ ಬಗ್ಗೆ ನೇರವಾಗಿ ಸಂಬಂಧಪಟ್ಟ ವಿಮಾ ಸಂಸ್ಥೆಗಳ ಕಚೇರಿಗಳಿಗೆ ಅಥವಾ ಹಣಕಾಸು ಸಂಸ್ಥೆ ಅಥವಾ ಕೃಷಿ, ತೋಟಗಾರಿಕೆ ಇಲಾಖೆ ಮೂಲಕ ತಕ್ಷಣ ಸೂಚನೆ ನೀಡಬೇಕು ಎಂದು ತಿಳಿಸಿದರು.

<><*<><>*><>

ಮುಂದಿನ ಎರಡು-ಮೂರು ದಿನಗಳಲ್ಲಿ ನೈಋತ್ಯ ಮುಂಗಾರು, ಮಧ್ಯ ಅರಬ್ಬಿ ಸಮುದ್ರದ ಕೆಲವು ಭಾಗಗಳು, ದಕ್ಷಿಣ ಅರಬ್ಬಿ ಸಮುದ್ರದ ಉಳಿದ ಭಾಗಗಳು, ಲಕ್ಷದ್ವೀಪ, ಕೇರಳ, ಕರ್ನಾಟಕ, ರಾಯಲಸೀಮಾ ಮತ್ತು ತಮಿಳುನಾಡಿನ ಕೆಲವು ಭಾಗಗಳು ಹಾಗೂ ನೈಋತ್ಯ ಬಂಗಾಳ ಕೊಲ್ಲಿಯಲ್ಲಿ ಮತ್ತಷ್ಟು ತೀವ್ರಗೊಳ್ಳಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರು ನಗರ ಸೇರಿದಂತೆ ರಾಜ್ಯದ ಕೆಲವೆಡೆ ಇಂದು ಗುಡುಗು ಸಹಿತ ಸಾಧಾರಣ ಮಳೆಯಾಗಿದೆ. ಹಾಸನದಲ್ಲಿ ೩ ಸೆಂಟಿಮೀಟರ್ ಮತ್ತು ಗದಗ ಜಿಲ್ಲೆಯ ಶಿರಹಟ್ಟಿಯಲ್ಲಿ ೧ ಸೆಂಟಿ ಮೀಟರ್ ಮಳೆಯಾಗಿದೆ. ಮುಂದಿನ ೨೪ ಗಂಟೆಗಳಲ್ಲಿ ರಾಜ್ಯದ ರಾಯಚೂರು, ಕೊಪ್ಪಳ, ಗದಗ, ಹಾವೇರಿ, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ಚಾಮರಾಜನಗರ, ಹಾಸನ ಕೋಲಾರ, ಮೈಸೂರು, ಮಂಡ್ಯ, ರಾಮನಗರ ಮತ್ತು ತುಮಕೂರು ಜಿಲ್ಲೆಗಳಲ್ಲಿ ಗುಡುಗು ಸಹಿತ ಧಾರಕಾರ ಮಳೆಯಾಗಲಿದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೨೪ ಗಂಟೆಗಳು ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡ ಕವಿದ ವಾತಾವರಣ. ಗುಡುಗು ಸಹಿತ ಸಾಧಾರಣ ಮಳೆ. ಕೆಲವೆಡೆ ಭಾರೀ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ೩೪, ಕನಿಷ್ಠ ೨೨ ಡಿಗ್ರಿ ಸೆಲ್ಸಿಯೆಸ್ ತಾಪಮಾನ ಸಂಭವ.

**<><*<><>*><>**

**ಸಂಕ್ಷಿಪ್ತ ಸುದ್ದಿ...**

೧. ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ರುಡ್‌ಸೆಟ್ ತರಬೇತಿ ಸಂಸ್ಥೆಯಲ್ಲಿ ೧೮ರಿಂದ ೪೫ ವಯಸ್ಸಿನ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗಾಗಿ 'ವೆಲ್ಡಿಂಗ್ ಮತ್ತು ಫ್ಯಾಬ್ರಿಕೇಶನ್' ಹಾಗೂ 'ರೆಫ್ರಿಜರೆಟರ್ ಮತ್ತು ಏರ್‌ಕಂಡೀಶನಿಂಗ್' ಉಚಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ ೧೫ ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ ೯೬೩೨೨೫೧೨೩ ಅನ್ನು ಸಂಪರ್ಕಿಸಬಹುದು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ೭.೩೫ ಕ್ಕೆ <>*><>**